**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :104 ಫ್ರಾ.ಸಾ. : 41**

ಸಾಕ್ಷಿಯ ಹೆಸರು : ಈಶ್ವರ್
ತಂದೆಯ ಹೆಸರು : ತಿಮ್ಮಾ ವರ್ಕರ್
ವಯಸ್ಸು : 72 ವರ್ಷ
ಉದ್ಯೋಗ : ರೈತಾಪಿ.
ವಾಸ : ಕಾನಗೋಡು, ಸಿದ್ದಾಪುರ.

**ದಿನಾಂಕಃ 25-10-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದಃ-**

1. ನಾನು ಹುಟ್ಟಿದಾಗಿನಿಂದ ಸಿದ್ದಾಪುರ ತಾಲೂಕಿನ ಕಾನಗೋಡು ಗ್ರಾಮದಲ್ಲಿ ವಾಸಿಸುತ್ತಿದ್ದೇನೆ. ನನಗೆ ಅಲ್ಲಿ ಸ್ವಂತ ಮನೆ ಇದೆ. 2001-02 ರಲ್ಲಿ ಸರ್ಕಾರದಿಂದ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ಕಾನಗೋಡು ಗ್ರಾಮ ಪಂಚಾಯತಿಗೆ ಶೌಚಾಲಯ ನಿರ್ಮಿಸಲು ರೂ.20 ಲಕ್ಷ ಮಂಜೂರು ಆಗಿತ್ತು ಎಂದು ಕೇಳಿದ್ದೇನೆ ಮತ್ತು 210 ಫಲಾನುಭವಿಗಳು ಆಯ್ಕೆ ಆಗಿದ್ದರು ಎಂದು ಕೇಳಿದ್ದೇನೆ ಆದರೆ ನಾನು ಫಲಾನುಭವಿಯಾಗಿ ಆಯ್ಕೆ ಆಗಿದ್ದೆ ಎಂಬುದು ನನಗೆ ಗೊತ್ತಿಲ್ಲ. ನನಗೆ ಶೌಚಾಲಯ ನಿರ್ಮಿಸಿಕೊಳ್ಳಲು ರೂ.3000/- ಸಹಾಯಧನವನ್ನು ಗ್ರಾಮ ಪಂಚಾಯತಿಯಿಂದ ನೀಡಿಲ್ಲ. ನನಗೆ ಶೌಚಾಲಯವನ್ನು ಸಹ ನಿರ್ಮಿಸಿಕೊಟ್ಟಿಲ್ಲ. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ಇದೆ. ಆರೋಪಿಯ ಹೆಸರು ಶೇಶಗಿರಿ. ಆರೋಪಿ ಪಂಚಾಯತಿ ಅಧ್ಯಕ್ಷ ಆಗಿದ್ದರು. ನಾನು ಪೊಲೀಸನವರ ಮುಂದೆ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದಃ-**

2. ನಾನು ನಿಪಿ-75 ರ ಪ್ರಕಾರ ಕರ್ನಾಟಕ ಲೋಕಾಯುಕ್ತ ಕಾರವಾರದ ಆರಕ್ಷಕ ನಿರೀಕ್ಷಕರು ದಿನಾಂಕ 14.09.2005 ರಂದು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನನಗೆ ವಿಷಯ ಎಲ್ಲಾ ಗೊತ್ತಿದ್ದರೂ ಆರೋಪಿ ನಮ್ಮ ಊರಿನವನು ಆಗಿದ್ದರಿಂದ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದಃ-**

3. ನಾನು ಶೌಚಾಲಯ ಪಡೆದುಕೊಂಡಿದ್ದೇನೆ ಎಂದರೆ ಸರಿಯಲ್ಲ, ಆದರೆ ನಂತರದಲ್ಲಿ ಶೌಚಾಲಯವನ್ನು ಮಾಡಿಕೊಟ್ಟಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಪಟ್ಟ ಅವಧಿಯಲ್ಲಿ ಶೌಚಾಲಯವನ್ನು ನನಗೆ ನಿರ್ಮಿಸಿಕೊಟ್ಟಿಲ್ಲ. ಅದೇ ಅವಧಿಯಲ್ಲಿ ಶೌಚಾಲಯ ನನಗೆ ಕೊಟ್ಟಿಲ್ಲ ಮತ್ತು ನಂತರದ ಅವಧಿಯಲ್ಲಿ ಕಟ್ಟಿಸಿಕೊಟ್ಟಿದ್ದಾರೆ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ಅವಧಿಯಲ್ಲಿ ಶೌಚಾಲಯ ನಿರ್ಮಿಸಿಕೊಟ್ಟಿದ್ದರೂ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ - ಇಲ್ಲ -**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ